# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(1ಬಿ)ಪಿ.ಆರ್/49/24-25

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 6. 2. 25

**ಸುತ್ತೋಲೆ**

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಗ್ರೂಫ್-'ಎ' ವೃಂದದ ಅಧಿಕಾರಿಗಳು ಸರ್ಕಾರಕ್ಕೆ ಆಸ್ತಿ ಮತ್ತು ಹೊಣೆಗಾರಿಕೆ ಪಟ್ಟಿಯನ್ನು ಸಲ್ಲಿಸುವ ಕುರಿತು.

ಉಲ್ಲೇಖ: 1) ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ತಿದ್ದುಪಡಿ ಅಧಿಸೂಚನೆ ಸಂಖ್ಯೆ: ಸಿಆಸುಇ/12/ಸೇನಿಸಿ/2022, ದಿ: 13-01-2023
2) ಸರ್ಕಾರದ ಆದೇಶ ಸಂಖ್ಯೆ: ನಅಇ 90 ಎಂ.ಎನ್.ಯು 2014 (ಭಾಗ-1) ದಿನಾಂಕ: 16-03-2020
3) ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಸುತ್ತೋಲೆ ಸಂಖ್ಯೆ: ನಅಇ 02 ಎಂ.ಎನ್.ಜಿ 2025, ದಿನಾಂಕ: 07-01-2025

--------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 2021ರ ನಿಯಮ 24ರ ಉಪ ನಿಯಮ (2)ರ ಅನುಸಾರ ಪ್ರತಿಯೊಬ್ಬ ಸರ್ಕಾರಿ ನೌಕರರು / ಅಧಿಕಾರಿಗಳು ಅರ್ಜಿಸಿದ ಸ್ಥಿರಾಸ್ತಿ ಮತ್ತು ಚರಾಸ್ತಿಗಳ ವಿವರಗಳನ್ನು ಆಸ್ತಿ ಮತ್ತು ಹೊಣೆಗಾರಿಕೆ ಪಟ್ಟಿಯ ನಮೂನೆ-1 ಮತ್ತು 2ರಲ್ಲಿ ಭರ್ತಿ ಮಾಡಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಿಗಳಿಗೆ ಆಯಾಯ ಆರ್ಥಿಕ ವರ್ಷದ ಮಾರ್ಚ್-31ರ ತಾರೀಖಿನೊಳಗೆ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ.

ಉಲ್ಲೇಖ-(2)ರ ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಹೊಸ ವೃಂದ ಮತ್ತು ನೇಮಕಾತಿ ನಿಯಮಾವಳಿಯನ್ನು ಜಾರಿಗೆ ತರಲಾಗಿದ್ದು, ಬಿ.ಬಿ.ಎಂ.ಪಿಯ ಇಂಜಿನಿಯರಿಂಗ್ ಇಲಾಖೆಯ ಗ್ರೂಫ್-ಎ ವೃಂದದ ಸಹಾಯಕ ಕಾರ್ಯಪಾಲಕ ಅಭಿಯಂತರರು, ಕಾರ್ಯಪಾಲಕ ಅಭಿಯಂತರರು, ಅಧೀಕ್ಷಕ ಅಭಿಯಂತರರು, ಮುಖ್ಯ ಅಭಿಯಂತರರು ಮತ್ತು ಪ್ರಧಾನ ಅಭಿಯಂತರರುಗಳಿಗೆ ಹಾಗೂ ಬಿ.ಬಿ.ಎಂ.ಪಿಯ ಕಂದಾಯ ಇಲಾಖೆ, ಅಕೌಂಟ್ಸ್ & ಆಡಿಟ್ ಇಲಾಖೆ, ಕೌನ್ಸಿಲ್ ಇಲಾಖೆ, ಶಿಕ್ಷಣ ಇಲಾಖೆ, ಅರಣ್ಯ ಇಲಾಖೆ, ಆರೋಗ್ಯ ಇಲಾಖೆ, ತೋಟಗಾರಿಕೆ ಇಲಾಖೆ, ಕಾನೂನು ಇಲಾಖೆ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗ್ರೂಪ್-'ಎ' ವೃಂದದ ಅಧಿಕಾರಿಗಳಿಗೆ ನಗರಾಭಿವೃದ್ಧಿ ಇಲಾಖೆಯು Cadre Controlling Authority ಆಗಿದ್ದು, ಇವರುಗಳ ಜೇಷ್ಠತಾ ಪಟ್ಟಿ, ಪದೋನ್ನತಿ, ಇಲಾಖಾ ವಿಚಾರಣೆ ಹಾಗೂ ಇತರ ಸೇವಾ ವಿಷಯಗಳನ್ನು ನಗರಾಭಿವೃದ್ಧಿ ಇಲಾಖೆಯಲ್ಲಿ ನಿರ್ವಹಿಸಲಾಗುತ್ತಿದೆ.

ಆದುದರಿಂದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಗ್ರೂಫ್-'ಎ' ವೃಂದದ ಅಧಿಕಾರಿಗಳಾದ ಸಹಾಯಕ ಕಾರ್ಯಪಾಲಕ ಅಭಿಯಂತರರು, ಕಾರ್ಯಪಾಲಕ ಅಭಿಯಂತರರು, ಅಧೀಕ್ಷಕ ಅಭಿಯಂತರರು, ಮುಖ್ಯ ಅಭಿಯಂತರರು ಮತ್ತು ಪ್ರಧಾನ ಅಭಿಯಂತರರುಗಳಿಗೆ ಹಾಗೂ ಬಿ.ಬಿ.ಎಂ.ಪಿಯ ಕಂದಾಯ ಇಲಾಖೆ, ಅಕೌಂಟ್ಸ್ & ಆಡಿಟ್ ಇಲಾಖೆ, ಕೌನ್ಸಿಲ್ ಇಲಾಖೆ, ಶಿಕ್ಷಣ ಇಲಾಖೆ, ಅರಣ್ಯ ಇಲಾಖೆ, ಆರೋಗ್ಯ ಇಲಾಖೆ, ತೋಟಗಾರಿಕೆ ಇಲಾಖೆ, ಕಾನೂನು ಇಲಾಖೆ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗ್ರೂಪ್-'ಎ' ವೃಂದದ

ಅಧಿಕಾರಿಗಳು ಆಯಾ ಆರ್ಥಿಕ ವರ್ಷದ 1ನೇ ಏಪ್ರಿಲ್ ಮಾಹೆಯಿಂದ ಮಾರ್ಚ್ 31ರ ಅಂತ್ಯಕ್ಕೆ ಇರುವಂತಹ ಆಸ್ತಿ ಮತ್ತು ಹೊಣೆಗಾರಿಕೆ ಪಟ್ಟಿಯ ನಮೂನೆ-1 ಮತ್ತು 2ರಲ್ಲಿ ಭರ್ತಿ ಮಾಡಿ, ವಿಳಂಬವಿಲ್ಲದೆ ಸಕಾಲದಲ್ಲಿ ಸರ್ಕಾರದ ನಗರಾಭಿವೃದ್ಧಿ ಇಲಾಖೆಗೆ ಕಡ್ಡಾಯವಾಗಿ ಸಲ್ಲಿಸಲು ಸೂಚಿಸಿದೆ ಹಾಗೂ ಇದುವರೆಗೂ ಆಸ್ತಿ ಮತ್ತು ಹೊಣೆಗಾರಿಕೆ ಪಟ್ಟಿಗಳನ್ನು ಸಲ್ಲಿಸದೆ ಇರುವ ಅಧಿಕಾರಿಗಳು ಕೂಡಲೇ ಸರ್ಕಾರಕ್ಕೆ ಸಲ್ಲಿಸಲು ಸೂಚಿಸಿದೆ. ತಪ್ಪಿದಲ್ಲಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 2021ರ ನಿಯಮ 24ರ ಉಪ ನಿಯಮ (2)ರ ಅನುಸಾರ ಮುಂದಿನ ಶಿಸ್ತಿನ ಕ್ರಮ ಜರುಗಿಸಲಾಗುವುದು.

ಮುಖ್ಯ ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಆಡಳಿತ) ರವರಿಗೆ ಕಳುಹಿಸಿದೆ.
: ಎಲ್ಲಾ ವಲಯ ಆಯುಕ್ತರು ರವರಿಗೆ ಕಳುಹಿಸಿದೆ.
: ಎಲ್ಲಾ ವಲಯ ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ಗ್ರೂಫ್ 'ಎ' ವೃಂದದ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಉಪ ಮುಖ್ಯ ಮಾಹಿತಿ ಅಧಿಕಾರಿ ರವರಿಗೆ ಕಳುಹಿಸುತ್ತಾ, ಸದರಿ ಆದೇಶವನ್ನು ಪಾಲಿಕೆಯ ವೆಬ್‌ಸೈಟ್ ನಲ್ಲಿ ಪ್ರಚುರಪಡಿಸಲು ಅಗತ್ಯ ಕ್ರಮ ಕೈಗೊಳ್ಳಲು ಕಳುಹಿಸಿದೆ.
: ಕಛೇರಿ ಪ್ರತಿ.